ಈ) ಇಲ್ಲ, ಆದಾಗ್ಯೂ ಕಾಲೇಜು ವಿದ್ಯಾರ್ಥಿನಿಲಯಗಳ ವಿದ್ಯಾರ್ಥಿಗಳ ಊಟದ ವ್ಯವಸ್ಥೆಗಾಗಿ ಮಾಹೆಯಾನ ನೀಡಲಾಗುತ್ತಿರುವ ರೂ. 300-00ಗಳು ಸಾಕಾಗುತ್ತಿಲ್ಲವೆಂಬ ವಿಷಯ ಸರ್ಕಾರದ ಗಮನಕ್ಕೆ ಬಂದಿದೆ.

ಉ) ಭೋಜನ ವೆಚ್ಚವನ್ನು ಹೆಚ್ಚಿಸುವ ಬಗ್ಗೆ ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು.

ವಿಷಯ:- ಬಾದಾಮಿ ತಾಲ್ಲೂಕ್ ಕೆರೂರು ಪಟ್ಟಣಕ್ಕೆ ಐ.ಡಿ.ಎಸ್.ಎಂ.ಟಿ ಯೋಜನೆ

1065 (2036) ಶ್ರೀ. ಬಿ.ಬಿ. ಚಿಮ್ಮನ ಕಟ್ಟಿ (ಬಾದಾಮಿ):- ಮಾನ್ಯ ಪೌರಾಡಳಿತ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಬಾದಾಮಿ ತಾಲ್ಲೂಕು ಕೆರೂರು ಪಟ್ಟಣ ಪಂಚಾಯತ್ ಅತೀ ಹಿಂದುಳಿದಿರುವುದು ಸರ್ಕಾರ ದವರ ಗಮನಕ್ಕೆ ಬಂದಿದೆಯೇ?

ಆ) ಕೆರೂರು ಪಟ್ಟಣದ ಸುಧಾರಣೆಗೆ ಈ ವರ್ಷ ಐ.ಡಿ.ಎಸ್.ಎಂ.ಟಿ. ಯೋಜನೆ ಅಳವಡಿಸಲು ಸರ್ಕಾರದವರು ಕ್ರಮ ಕೈಗೊಳ್ಳುವರೇ?

ಶ್ರೀ. ಮಿರಾಜುದ್ದಿನ್ ಎನ್. ಪಟೇಲ್ (ಪೌರಾಡಳಿತ ರಾಜ್ಯ ಸಚಿವರು):-

ಅ) ಬಂದಿದೆ.

ಆ) ಕೆರೂರು ಪಟ್ಟಣವನ್ನು ಐ.ಡಿ.ಎಸ್.ಎಂ.ಟಿ ಯೋಜನೆಯಡಿಯಲ್ಲಿ ಅಳವಡಿಸುವ ಬಗ್ಗೆ ಮನವಿಗಳು ಸ್ವೀಕೃತವಾಗಿದ್ದು ಈ ವಿಷಯವು ಸರ್ಕಾರದ ಪರಿಶೀಲನೆಯಲ್ಲಿದೆ.

ವಿಷಯ:- ಬಾದಾಮಿ ತಾಲ್ಲೂಕಿನಲ್ಲಿ ಸಣ್ಣ ಕೈಗಾರಿಕೆ ಉದ್ದಿಮೆಗಳ ಕೊರತೆ

1066 (2038) ಶ್ರೀ ಬಿ.ಬಿ. ಚಿಮ್ಮನಕಟ್ಟಿ (ಬಾದಾಮಿ):- ಮಾನ್ಯ ಸಣ್ಣ ಪ್ರಮಾಣದ ಕೈಗಾರಿಕಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಬಿಜಾಪುರ ಜಿಲ್ಲೆ ಬಾದಾಮಿ ತಾಲ್ಲೂಕು ಸಣ್ಣ ಕೈಗಾರಿಕಾ ಉದ್ದಿಮೆಗಳಿಲ್ಲದಿರುವುದು ಸರ-ಕಾರದ ಗಮನಕ್ಕೆ ಬಂದಿದೆಯೆ?

ಆ) ಹಾಗಿದ್ದಲ್ಲಿ ಬರಗಾಲ ಪ್ರವೇಶದ ನಿರುದ್ಯೋಗಿ ಯುವಕರಿಗೆ ಪ್ರೋತ್ಸಾಹ ನೀಡಲು ಸರಕಾರ ದವರು ಸಣ್ಣ ಕೈಗಾರಿಕಾ ಉದ್ದಿಮೆಗಳ ಸ್ಥಾಪನೆಗೆ ಕ್ರಮ ಕೈಗೊಳ್ಳುವರೇ?

ಶ್ರೀ ಬಿ.ಎ. ಮೊಹಿದ್ದೀನ್ (ಸಣ್ಣ ಪ್ರಮಾಣದ ಕೈಗಾರಿಕಾ ಸಚಿವರು):-

ಅ) 478 ಸಣ್ಣ ಮತ್ತು ಅತಿ ಸಣ್ಣ ಕೈಗಾರಿಕೆಗಳಿವೆ.

ಆ) ಉದ್ಭವಿಸುವುದಿಲ್ಲ.

ವಿಷಯ:- ಮೊಗೇರ ಜಾತಿಯನ್ನು ಪರಿಶಿಷ್ಟ ಜಾತಿಯ ಪಟ್ಟಿಯಲ್ಲಿ ಸೇರಿಸಿರುವುದು.

1067 (1943) ಶ್ರೀ ಟಿ.ಪಿ.ಎಸ್. ಜಯವಂತ (ಸಿಠಸಿ):- ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?